ಮೈಸೂರ ಗೆಜಿಟ್.

ನಂ. 50 ಸರ್ಕಾರದಿಂದ ಪಾಯಿಷ್ ಆದ್ದು. ಸನ್ 1887.

ಬೆಂಗಳೂರು, ಶನಿವಾರ, ಡಿಶಂಬರ್ ತಾ॥ 17, ಸನ್ 1887.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜೀಯವರು, ಸರ್ವೇ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫೀಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ಷ ಇನ್‌ಸ್ಪೆಕ್ಟರ್ ಜನರಲ್ಲವರು, ಅಂಚೇ ಬಕ್ಷೀರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷ್ಷ ಜಡ್ಜ್‌ರು, ಡಿ॥ ಡೆಪ್ಯೂಟಿ ಕಮ್ಮಿಷನರ್ಲುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರ್‌ಟೆಂಡೆಂಟರು, ಫಾರೆಸ್ಟು ಆಫೀಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟ್‌ಆಫೀಸ್ ನೋಟೀಸ್‌ಗಳು.

3ನೇ ಭಾಗ–ಶ್ರೀಮನ್ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷ್ಷಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

1ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಇಸ್ತಿಹಾರ್‌ನಾಮೆಗಳು.

ತಾರೀಖು 14ನೇ ಡಿಶಂಬರ್ 1887.

ನಂ. 154.—ಶ್ರೀಮನ್ ಮಹಾರಾಜಾ ಸರ್ಕಾರದವರ ಸರ್ಕೀಟ್ ಸವಾರೀಸಂಗಡ ಕೆಲಸದ ಮೇಲೆ ಮೆ॥ ಕೆ. ಶೇಷಾದ್ರಿಐಯ್ಯಂಗಾರ್, ಸಿ. ಯಸ್. ಐ. ಯವರು ಮೈಸೂರು ದೇಶದಿಂದ ಅನ್ಯತ್ರ ಹೋಗಿರುವ ಕಾಲದಲ್ಲಿ ಮೆ॥ ಟಿ. ಆರ್. ಎ. ತಂಬೂಚೆಟ್ಟಿಯವರು, ಮೈಸೂರು ದೇಶದ ದಿವಾನರಾಗಿ ಆಕ್ಟಿಂಗ್ ತರೀಕ್ ಕೆಲಸ ನೋಡತಕ್ಕದ್ದೆಂತಲೂ ಶ್ರೀಮನ್ ಮಹಾರಾಜಾ ಸರ್ಕಾರದವರ ಮಂತ್ರಾಲೋಚಕ ಸಭೆಯ ಯಕ್ಸ್ ಆಫಿಷಿಯೊ ಪ್ರೆಸಿಡೆಂಟರಾಗಿ ಯಿರತಕ್ಕದ್ದೆಂತಲೂ ಶ್ರೀಮನ್ ಮಹಾರಾಜಾ ಸರ್ಕಾರದವರು ನಿಯಮಿಸುತ್ತಾರೆ.

ಕೆ. ಶೇಷಾದ್ರಿಐಯ್ಯರ್,
ದಿವಾನ್.

ತಾರೀಖು 25ನೇ ನವಂಬರ್ 1887.

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೇಯಲ್ಲಿ ನಮೂದಿಸಿದ ಪ್ರಕಾರ) ಜೋಡೀ ವ ಕಾಯಂಗುತ್ತಾದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮ್ಮೋಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ವ ಕಾಯಂಗುತ್ತಾ ಗ್ರಾಮಗಳು ಇದರಡೀಕಂಡ ತಖ್ತೇಯಲ್ಲಿ ನಮೂದಿರುವ ಸ್ಥಳಗಳಲ್ಲೂ ವ ತಾರೀಖುಗಳಲ್ಲೂ ಬಹಿರಂಗವಾದ ಹರಾಜುಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೇ ಗ್ರಾಮಗಳು ಚೆಡ ದಖಾಸ್ತುದಾರರಿಗೆ ಹರಾಜ್ ನಿಲ್ಲುವದು.